ಕನ್ನಡ ಪೋಸ್ಟ್
ಸಂಪಾದಕ : ಮಂಜು ಬನವಾಸೆ
KANNADA POST
ಇದು ಸುದ್ದಿ ವಿಳಾಸ
ಕನ್ನಡ ದಿನಪತ್ರಿಕೆ
ಹಾಸನ | E-mail : kannadapostnews@gmail.com | / ಕನ್ನಡ post | Price: ₹1
Vol.No.02 | Issue. 250 | Pages. 2 | Date: 17-09-2026, THURSDAY | RNI NO: KARKAN/2024/89601 | Kannada Daily
ಸಂಪುಟ : 02 - ಸಂಚಿಕೆ : 250 - ಪುಟಗಳು : 2 17-09-2026 ಗುರುವಾರ Ph: 8762954248 ದರ : ₹1

# ಶ್ರೀದೇವಿ ಲಾಡ್ಜ್‌ನಲ್ಲಿ ಯುವತಿ ಅನುಮಾನಾಸ್ಪದ ಸಾವು

## ಸ್ನೇಹಿತರೊಂದಿಗೆ ಮಲೆನಾಡು ಪ್ರವಾಸಕ್ಕೆ ಬಂದಿದ್ದ ವರ್ಷಾ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ತಾಲೂಕಿನ ವಳಲಹಳ್ಳಿ ಕೂಡಿಗೆಯಲ್ಲಿರುವ 'ಶ್ರೀದೇವಿ ಲಾಡ್ಜ್'ನಲ್ಲಿ ಬೆಂಗಳೂರಿನ ಯುವತಿಯೊಬ್ಬರು ಅನುಮಾನಾಸ್ಪದವಾಗಿ ಮೃತಪಟ್ಟಿರುವ ಘಟನೆ ಬೆಳಕಿಗೆ ಬಂದಿದ್ದು, ಸಕಲೇಶಪುರ ಗ್ರಾಮಾಂತರ ಠಾಣೆ ಪೊಲೀಸರು ಪ್ರಕರಣದ ಕುರಿತು ತನಿಖೆ ನಡೆಸುತ್ತಿದ್ದಾರೆ.

ಬೆಂಗಳೂರು ನಾಗಸಂದ್ರ ನಿವಾಸಿ ವರ್ಷಾ (23) ಮೃತಪಟ್ಟ ಯುವತಿ. ತೀರ್ಥಹಳ್ಳಿಯ ಕಲಾವತಿ ಹಾಗೂ ಮಡಿಕೇರಿಯ ಅರುಣ್‌ಕುಮಾರ್ ದಂಪತಿಯ ಏಕೈಕ ಪುತ್ರಿಯಾಗಿರುವ ವರ್ಷಾ, ಮಂಗಳೂರಿನ ಸೆಂಟ್ ಜಾನ್ಸ್‌ನಲ್ಲಿ ಸಿಎ ವ್ಯಾಸಂಗ ಮಾಡಿದ್ದು, ಬೆಂಗಳೂರಿನಲ್ಲಿ ಉದ್ಯೋಗ ಹುಡುಕುತ್ತಿದ್ದರು ಎನ್ನಲಾಗಿದೆ.

ವರ್ಷಾ ತನ್ನ ಬಾಲ್ಯದ ಸ್ನೇಹಿತರಾದ ರಘು ಹಾಗೂ ದರ್ಶನ್ ಜತೆ ಶುಕ್ರವಾರ ಸಕಲೇಶಪುರ ಭಾಗಕ್ಕೆ ಪ್ರವಾಸಕ್ಕೆ ಬಂದಿದ್ದರು. ಮೂವರು ಬೆಟ್ಟದ ಭೈರವೇಶ್ವರ, ಮಜಗಹಳ್ಳಿ ಫಾಲ್ಸ್ ಸೇರಿದಂತೆ ವಿವಿಧ ಪ್ರವಾಸಿ ತಾಣಗಳಿಗೆ ಭೇಟಿ ನೀಡಿ, ವಳಲಹಳ್ಳಿ ಕೂಡಿಗೆಯ ಶ್ರೀದೇವಿ ಲಾಡ್ಜ್‌ನ ಒಂದೇ ಕೊಠಡಿಯಲ್ಲಿ ತಂಗಿದ್ದರು ಎನ್ನಲಾಗಿದೆ.

ಲಾಡ್ಜ್‌ನಲ್ಲಿ ಸ್ನಾನಕ್ಕೆ ತೆರಳಿದ್ದ ಸಂದರ್ಭದಲ್ಲಿ ವರ್ಷಾ ಮೃತಪಟ್ಟಿದ್ದಾರೆ ಎನ್ನಲಾಗಿದ್ದು, ಬಳಿಕ ರಘು ಮತ್ತು ದರ್ಶನ್ ಆಕೆಯನ್ನು ಸಕಲೇಶಪುರದ ಕ್ರಾಫರ್ಡ್ ಆಸ್ಪತ್ರೆಗೆ ಕರೆತಂದಿದ್ದಾರೆ. ಆಸ್ಪತ್ರೆ ಸಿಬ್ಬಂದಿ ಪೊಲೀಸರಿಗೆ ಮಾಹಿತಿ ನೀಡಿದ್ದು, ಸಕಲೇಶಪುರ ಗ್ರಾಮಾಂತರ ಠಾಣೆ ಪೊಲೀಸರು ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದ್ದಾರೆ. ಸಾವಿನ ನಿಖರ ಕಾರಣ ತಿಳಿಯಲು ಮೃತದೇಹವನ್ನು ಮರಣೋತ್ತರ ಪರೀಕ್ಷೆಗಾಗಿ ಹಾಸನ ಜಿಲ್ಲಾಸ್ಪತ್ರೆಗೆ ರವಾನಿಸಲಾಗಿದೆ.

### ಸಾವಿನ ಬಗ್ಗೆ ತಾಯಿ ಅನುಮಾನ

ಪ್ರವಾಸಕ್ಕೆ ತೆರಳುವ ಮುನ್ನ ಸ್ನೇಹಿತರು ಹಾಗೂ ಸ್ನೇಹಿತೆಯರೊಂದಿಗೆ ಕಾರಿನಲ್ಲಿ ಸಕಲೇಶಪುರಕ್ಕೆ ಹೋಗುತ್ತಿರುವುದಾಗಿ ವರ್ಷಾ ಮನೆಯಲ್ಲಿ ತಿಳಿಸಿದ್ದರು ಎನ್ನಲಾಗಿದೆ. ಆದರೆ ವರ್ಷಾ ರಘು ಹಾಗೂ ದರ್ಶನ್ ಜತೆ ಆಟೋದಲ್ಲಿ ಪ್ರವಾಸಕ್ಕೆ ಬಂದಿರುವುದು ತಿಳಿದುಬಂದಿದೆ.





ಮನೆಗೆ ವಾಪಸ್ ಬರುವುದಾಗಿ ವರ್ಷಾ ತಾಯಿಗೆ ಸಂದೇಶ ಕಳುಹಿಸಿದ್ದರು ಎನ್ನಲಾಗಿದೆ. ''ಮಗಳು ಆರೋಗ್ಯವಾಗಿದ್ದಳು. ಬೆಂಗಳೂರಿನಲ್ಲಿ ಕೆಲಸ ಹುಡುಕುತ್ತಿದ್ದಳು. ಸ್ನೇಹಿತರು ಹಾಗೂ ಸ್ನೇಹಿತೆಯರೆಲ್ಲ ಸೇರಿ ಪ್ರವಾಸಕ್ಕೆ ಹೋಗುವುದಾಗಿ ಹೇಳಿದ್ದಳು. ಆದರೆ ಇಲ್ಲಿ ಬಂದು ನೋಡಿದಾಗ ಪರಿಸ್ಥಿತಿ ಬೇರೆಯಾಗಿದೆ. ಮಗಳ ಸಾವಿನ ಬಗ್ಗೆ ಅನುಮಾನವಿದೆ,'' ಎಂದು ತಾಯಿ ಕಲಾವತಿ ಶಂಕೆ ವ್ಯಕ್ತಪಡಿಸಿದ್ದಾರೆ.

ಪೊಲೀಸರು ಪ್ರಕರಣದ ಕುರಿತು ಮಾಹಿತಿ ಸಂಗ್ರಹಿಸಿ ತನಿಖೆ ಮುಂದುವರಿಸಿದ್ದು, ಮರಣೋತ್ತರ ಪರೀಕ್ಷೆಯ ವರದಿ ಬಳಿಕ ಸಾವಿನ ನಿಖರ ಕಾರಣ ಸ್ಪಷ್ಟವಾಗಬೇಕಿದೆ.

### ಲಾಡ್ಜ್ ಅಧಿಕೃತತೆ ಕುರಿತು

### ಸ್ಥಳೀಯರ ಪ್ರಶ್ನೆ

ಯುವತಿಯ ಸಾವಿನ ಬೆನ್ನಲ್ಲೇ ಶ್ರೀದೇವಿ ಲಾಡ್ಜ್‌ನ ಕಾರ್ಯಾಚರಣೆಯ ಅಧಿಕೃತತೆ ಕುರಿತೂ ಸ್ಥಳೀಯರು ಗಂಭೀರ ಪ್ರಶ್ನೆಗಳನ್ನು ಎತ್ತಿದ್ದಾರೆ.

ಹಿರಿಯೂರು ಗ್ರಾಮದ ಸರ್ವೆ ನಂ. 4/14ರಲ್ಲಿ ವಸತಿ ಮನೆ ನಿರ್ಮಾಣಕ್ಕೆ ಮಾತ್ರ ಗ್ರಾಮ ಪಂಚಾಯಿತಿಯಿಂದ ಅನುಮತಿ ಪಡೆದು, ಅದೇ ಕಟ್ಟಡದಲ್ಲಿ ವಾಣಿಜ್ಯ ಮಳಿಗೆಗಳ ಜತೆಗೆ 'ಶ್ರೀದೇವಿ ಲಾಡ್ಜ್' ನಡೆಸಲಾಗುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಲಾಡ್ಜ್ ನಡೆಸಲು ಅಗತ್ಯವಿರುವ ಪರವಾನಗಿ ಹಾಗೂ ಸಂಬಂಧಪಟ್ಟ ಇಲಾಖೆಗಳ ಅನುಮತಿಗಳು ಇವೆಯೇ ಎಂಬುದನ್ನು ಅಧಿಕಾರಿಗಳು ಪರಿಶೀಲಿಸಬೇಕು ಎಂದು ಒತ್ತಾಯಿಸಿದ್ದಾರೆ.

ಈ ಕಟ್ಟಡದ ವಿಚಾರವಾಗಿ ಮೇ 18ರಂದು ಗ್ರಾಮ ಪಂಚಾಯಿತಿಯಿಂದ ನೋಟಿಸ್ ನೀಡಿದ್ದರೂ ಅದಕ್ಕೆ ಉತ್ತರ ನೀಡಿಲ್ಲ ಎಂದು ಸ್ಥಳೀಯರು ಹೇಳಿದ್ದು, ನೋಟಿಸ್ ಬಳಿಕವೂ ಲಾಡ್ಜ್ ಕಾರ್ಯಾಚರಣೆ ಮುಂದುವರಿದಿರುವುದಕ್ಕೆ ಆಕ್ಷೇಪ ವ್ಯಕ್ತಪಡಿಸಿದ್ದಾರೆ.

### ಅತಿಥಿಗಳ ದಾಖಲೆ ಪರಿಶೀಲನೆಯಾಗಿತ್ತೇ?

ಲಾಡ್ಜ್‌ನಲ್ಲಿ ತಂಗುವವರ ಗುರುತಿನ ದಾಖಲೆಗಳನ್ನು ನಿಯಮಾನುಸಾರ ಪಡೆಯಲಾಗುತ್ತಿತ್ತೇ? ವರ್ಷಾ ಹಾಗೂ ಆಕೆಯೊಂದಿಗೆ ಬಂದಿದ್ದವರು ಹಲವು ದಿನಗಳ ಕಾಲ ತಂಗಲು ಅವಕಾಶ ನೀಡುವಾಗ ಅಗತ್ಯ ದಾಖಲೆಗಳನ್ನು ಪರಿಶೀಲಿಸಲಾಗಿತ್ತೇ? ಎಂಬುದರ ಬಗ್ಗೆಯೂ ತನಿಖೆ ನಡೆಸಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

ರಾತ್ರಿ ವೇಳೆ ಲಾಡ್ಜ್‌ನಲ್ಲಿ ಗದ್ದಲ ನಡೆಯುತ್ತಿತ್ತು ಹಾಗೂ ಅನೈತಿಕ ಮತ್ತು ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಲಾಗುತ್ತಿದೆ ಎಂಬ ಆರೋಪಗಳೂ ಕೇಳಿಬಂದಿದ್ದು, ಈ ಆರೋಪಗಳ ಸತ್ಯಾಸತ್ಯತೆಯನ್ನು ಪೊಲೀಸರು ಹಾಗೂ ಸಂಬಂಧಪಟ್ಟ ಇಲಾಖೆಗಳು ಪರಿಶೀಲಿಸಬೇಕು ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

### ಉಲ್ಲಂಘನೆ ಸಾಬೀತಾದರೆ ಬೀಗ ಜಡಿಯಿರಿ

ಯುವತಿ ವರ್ಷಾ ಸಾವಿನ ನಿಖರ ಕಾರಣವನ್ನು ತನಿಖೆಯ ಮೂಲಕ ಬಹಿರಂಗಪಡಿಸುವುದರ ಜತೆಗೆ, ಶ್ರೀದೇವಿ ಲಾಡ್ಜ್‌ನ ಪರವಾನಗಿ ಮತ್ತು ಕಟ್ಟಡ ಬಳಕೆಯ ಕಾನೂನುಬದ್ಧತೆಯನ್ನೂ ಪರಿಶೀಲಿಸಬೇಕು. ಅನುಮತಿ ಉಲ್ಲಂಘನೆ ಅಥವಾ ಪರವಾನಗಿ ರಹಿತ ಕಾರ್ಯಾಚರಣೆ ಸಾಬೀತಾದಲ್ಲಿ ಲಾಡ್ಜ್‌ಗೆ ಬೀಗ ಜಡಿದು ಕಾನೂನು ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸಿದ್ದಾರೆ.

''ಪ್ರವಾಸೋದ್ಯಮದ ಹೆಸರಿನಲ್ಲಿ ಕಾನೂನುಬಾಹಿರ ಚಟುವಟಿಕೆಗಳಿಗೆ ಅವಕಾಶ ನೀಡಬಾರದು. ಯುವತಿಯ ಸಾವಿನ ಪ್ರಕರಣ ಹಾಗೂ ಲಾಡ್ಜ್ ಕಾರ್ಯಾಚರಣೆಯ ಅಧಿಕೃತತೆ ಎರಡರ ಬಗ್ಗೆಯೂ ಸಮಗ್ರ ತನಿಖೆ ನಡೆಸಬೇಕು'' ಎಂದು ಸ್ಥಳೀಯರು ಒತ್ತಾಯಿಸಿದ್ದಾರೆ.

ಪ್ರಕರಣ ಸಕಲೇಶಪುರ ಗ್ರಾಮಾಂತರ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ನಡೆದಿದೆ.




# ಸ್ಕಾಲರ್ಸ್ ಶಾಲೆಯಲ್ಲಿ ಸಂಭ್ರಮದ ಗಣೇಶ ವಿಸರ್ಜನೆ

## ಕುಣಿದು ಕುಪ್ಪಳಿಸಿದ ಮಕ್ಕಳು, ಪರಿಸರ ಕಾಳಜಿಯ ಸಂದೇಶ




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ : ಸ್ಕಾಲರ್ಸ್ ಶಾಲೆಯ ವತಿಯಿಂದ ಗಣೇಶ ಚತುರ್ಥಿಯ ಅಂಗವಾಗಿ ಪ್ರತಿಷ್ಠಾಪಿಸಲಾಗಿದ್ದ ಶ್ರೀ ಗಣೇಶ ಮೂರ್ತಿಯ ವಿಸರ್ಜನಾ ಕಾರ್ಯಕ್ರಮವನ್ನು ಅತ್ಯಂತ ಭಕ್ತಿ, ಶ್ರದ್ಧೆ ಹಾಗೂ ಸಂಭ್ರಮದಿಂದ ಆಚರಿಸಲಾಯಿತು.

ಶಾಲೆಯ ಆಡಳಿತಾಧಿಕಾರಿ ಡಾ. ಎಚ್. ಎನ್. ಚಂದ್ರಶೇಖರ್ ಹಾಗೂ ಕಾರ್ಯದರ್ಶಿಗಳಾದ ಮಮತಾ ಚಂದ್ರಶೇಖರ್ ಅವರ ನೇತೃತ್ವದಲ್ಲಿ ಗಣೇಶ ವಿಸರ್ಜನಾ ಕಾರ್ಯಕ್ರಮ ಜರುಗಿತು. ವಿದ್ಯಾರ್ಥಿಗಳು ಹಾಗೂ ಶಿಕ್ಷಕರು ಗಣಪತಿಗೆ ವಿಶೇಷ ಪೂಜೆ ಮತ್ತು ಆರತಿ ಸಲ್ಲಿಸಿದರು. ತದನಂತರ ಗಣೇಶ ಮೂರ್ತಿಯನ್ನು ಮೆರವಣಿಗೆಯ ಮೂಲಕ ವಿಸರ್ಜನಾ ಸ್ಥಳಕ್ಕೆ ಕೊಂಡೊಯ್ಯಲಾಯಿತು.

### ಮಕ್ಕಳಿಂದ ನೃತ್ಯ, ಸಿಹಿ ವಿತರಣೆ

ವಿಸರ್ಜನಾ ಮೆರವಣಿಗೆಯಲ್ಲಿ ಶಾಲಾ ಮಕ್ಕಳು ಅತ್ಯಂತ ಉತ್ಸಾಹದಿಂದ ಭಾಗವಹಿಸಿದ್ದರು. ಭಕ್ತಿಗೀತೆ ಹಾಗೂ ಸಂಗೀತದ ತಾಳಕ್ಕೆ ತಕ್ಕಂತೆ ಹೆಜ್ಜೆ ಹಾಕಿದ ಮಕ್ಕಳು ಸಂಭ್ರಮದಿಂದ ಕುಣಿದು ಕುಪ್ಪಳಿಸಿದರು. ಮಕ್ಕಳ ಈ ಖುಷಿ ಹಾಗೂ ಸಂತಸಕ್ಕೆ ಮತ್ತಷ್ಟು ಮೆರುಗು ನೀಡುವಂತೆ ಎಲ್ಲರಿಗೂ ಸಿಹಿ ವಿತರಿಸಲಾಯಿತು.

ಪರಿಸರ ಸ್ನೇಹಿ ಗಣೇಶೋತ್ಸವದ ಅರಿವು:

ಕೇವಲ ಆಚರಣೆ ಮಾತ್ರವಲ್ಲದೆ, ಈ ವಿಶೇಷ ಸಂದರ್ಭದಲ್ಲಿ ಪರಿಸರ ಸಂರಕ್ಷಣೆ, ಸ್ವಚ್ಛತೆ ಹಾಗೂ 'ಪರಿಸರ ಸ್ನೇಹಿ ಗಣೇಶೋತ್ಸವ'ದ ಮಹತ್ವದ ಕುರಿತು ವಿದ್ಯಾರ್ಥಿಗಳಿಗೆ ಜಾಗೃತಿ ಮೂಡಿಸಲಾಯಿತು. ಶಿಕ್ಷಕರು ಹಾಗೂ ಶಾಲಾ ಸಿಬ್ಬಂದಿಯವರ ಸಹಕಾರದಿಂದ ಇಡೀ ಕಾರ್ಯಕ್ರಮವು ಅತ್ಯಂತ ಶಿಸ್ತುಬದ್ಧವಾಗಿ ಮತ್ತು ಯಶಸ್ವಿಯಾಗಿ ನೆರವೇರಿತು.

ಭಕ್ತಿ, ಸಂಭ್ರಮ, ಸೌಹಾರ್ದತೆ ಹಾಗೂ ಪರಿಸರ ಕಾಳಜಿಯೊಂದಿಗೆ ನಡೆದ ಸ್ಕಾಲರ್ಸ್ ಶಾಲೆಯ ಈ ಗಣೇಶ ವಿಸರ್ಜನಾ ಕಾರ್ಯಕ್ರಮವು ವಿದ್ಯಾರ್ಥಿಗಳಲ್ಲಿ ಸಂತಸದ ಮತ್ತು ಸ್ಮರಣೀಯ ನೆನಪನ್ನು ಮೂಡಿಸುವಲ್ಲಿ ಯಶಸ್ವಿಯಾಗಿದೆ.

# ಕಾಡುಕೋಣಗಳಿವೆ ರಾತ್ರಿ ವೇಳೆ ಎಚ್ಚರ

ಸಕಲೇಶಪುರ : ಕಾಡುಕೋಣಗಳು ರಸ್ತೆ ದಾಟುವ ದೃಶ್ಯ ವೈರಲ್ ಪತ್ರಕರ್ತ ಪ್ರದೀಪ್ ಬಾಳ್ಳುಪೇಟೆ ಅವರ ಮೊಬೈಲ್‌ನಲ್ಲಿ ಸೆರೆಯಾದ ಕಾಡುಕೋಣಗಳು ರಸ್ತೆ ದಾಟುವ ದೃಶ್ಯ. ಮಂಗಳವಾರ ತಡ ರಾತ್ರಿ ಸುದ್ದಿ ಸಂಗ್ರಹಣೆಗೆ ತೆರಳಿ ವಾಪಸ್ ಆಗುವಾಗ ಹೆತ್ತೂರಿನಿಂದ ಸಕಲೇಶಪುರಕ್ಕೆ ಬರುವ ಮಾರ್ಗ ಮಧ್ಯ ಮೂರು ಕಾಡುಕೋಣಗಳು ರಸ್ತೆ ದಾಟುತ್ತಿದ್ದನ್ನು ಪತ್ರಕರ್ತ ಪ್ರದೀಪ್.

ಮಲೆನಾಡು ಭಾಗದಲ್ಲಿ ಕಾಡಾನೆಗಳ ಜೊತೆಗೆ ಕಾಡುಕೋಣಗಳ ಹಾವಳಿ ಹೆಚ್ಚಾಗಿದ್ದು ಸಾರ್ವಜನಿಕರು



ಹಾಗೂ ವಾಹನ ಸವಾರರು ರಾತ್ರಿ ವೇಳೆ ಎಚ್ಚರಿಕೆಯಿಂದ ಓಡಾಡುವಂತೆ ಮನವಿ ಮಾಡಿದ್ದಾರೆ.

# ವಿದ್ಯುತ್-ಕುಡಿಯುವ ನೀರು-ಏತ ನೀರಾವರಿ

## ಸಮಸ್ಯೆ ಶೀಘ್ರ ಇತ್ಯರ್ಥ : ಶಾಸಕ ಕಡಕ್ ಸೂಚನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ನಗರ ಹಾಗೂ ಸ್ಥಳೀಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ತುರ್ತು ವಿದ್ಯುತ್ ಸಮಸ್ಯೆಗಳು, ಮೂಲಸೌಕರ್ಯ ಕಾಮಗಾರಿಗಳ ಪ್ರಗತಿ ಹಾಗೂ ಸಾರ್ವಜನಿಕ ಕುಂದುಕೊರತೆ ನಿವಾರಣೆಗೆ ಸಂಬಂಧಿಸಿದಂತೆ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಅಧ್ಯಕ್ಷತೆಯಲ್ಲಿಂದು ಕೆಪಿಟಿಸಿಎಲ್, ಸೆಸ್ಕಾಂ ಮತ್ತು ನಗರಸಭೆ ಅಧಿಕಾರಿಗಳ ಮಹತ್ವದ ಜಂಟಿ ಪರಿಶೀಲನಾ ಸಭೆ ನಡೆಯಿತು.

ಸಭೆಯಲ್ಲಿ ಪ್ರಮುಖವಾಗಿ ಹಾಸನದ 220 ಕೆವಿ ಸ್ವೀಕರಣಾ ಕೇಂದ್ರದಲ್ಲಿ ಇತ್ತೀಚೆಗೆ ಸಂಭವಿಸಿದ 100 ಎಂವಿಎ ಪರಿವರ್ತಕದ ಅಗ್ನಿ ಅವಘಡದ ತಾಂತ್ರಿಕ ಪರಿಶೀಲನೆ ನಡೆಸಲಾಯಿತು.

ಸಾರ್ವಜನಿಕರಿಗೆ ತೊಂದರೆಯಾಗದಂತೆ ಮಾಡಲಾಗಿರುವ ಪರ್ಯಾಯ ವಿದ್ಯುತ್ ವ್ಯವಸ್ಥೆಯನ್ನು ಪರಾಮರ್ಶಿಸಿದ ಶಾಸಕರು, ಹೊಸ ಪರಿವರ್ತಕವನ್ನು ಶೀಘ್ರವಾಗಿ ತರಿಸಿ ಅಳವಡಿಸುವ ಪ್ರಗತಿ ಕಾರ್ಯವನ್ನು ಚುರುಕುಗೊಳಿಸಲು ಕಡ್ಡಾಯವಾಗಿ ಸೂಚಿಸಿದರು.

ಸಭೆಯ ಪ್ರಮುಖ ನಿರ್ಧಾರ ಮತ್ತು ಸೂಚನೆ: ಉಪಕೇಂದ್ರಗಳ ಮೇಲ್ದರ್ಜೆಗೇರಿಸುವಿಕೆ, 220 ಕೆವಿ ಹಾಸನ ಮತ್ತು ಉಗನೆ ಉಪಕೇಂದ್ರಗಳ ಸಾಮರ್ಥ್ಯ ಹೆಚ್ಚಳದ ಬಾಕಿ ಕಾಮಗಾರಿಗಳನ್ನು ತಕ್ಷಣ ಪೂರ್ಣಗೊಳಿಸಲು ಸೂಚಿಸಲಾಯಿತು.



ಪ್ರಸ್ತಾಪಿತ ಯಲಗುಂದ ಮತ್ತು ಅಗಿಲೆ ಉಪಕೇಂದ್ರಗಳ ಭೂಸ್ವಾಧೀನ ಹಾಗೂ ಟೆಂಡರ್ ಪ್ರಕ್ರಿಯೆಯ ಸದ್ಯದ ಸ್ಥಿತಿಗತಿಯನ್ನು ಪರಿಶೀಲಿಸಿ ವೇಗ ನೀಡಲು ನಿರ್ದೇಶಿಸಲಾಯಿತು.

ಗ್ರಾಮೀಣ ವಿದ್ಯುತ್ ಮತ್ತು ವೋಲ್ಟೇಜ್ ಸಮಸ್ಯೆ: ಗ್ರಾಮೀಣ ಭಾಗದಲ್ಲಿ ಎದುರಾಗುತ್ತಿರುವ ಕಡಿಮೆ ವೋಲ್ಟೇಜ್ ಸಮಸ್ಯೆ ನಿವಾರಣೆಗೆ ವಿದ್ಯುತ್ ಮಾರ್ಗಗಳ ಬಲವರ್ಧನೆ ಹಾಗೂ ಮಹಾನಗರ ಪಾಲಿಕೆ ವ್ಯಾಪ್ತಿಗೆ ಹೊಸದಾಗಿ ಸೇರ್ಪಡೆಯಾಗಿರುವ ಗ್ರಾಮಗಳಿಗೆ ನಗರ ಮಾದರಿಯ ವಿದ್ಯುತ್ ಸರಬರಾಜು ಕಲ್ಪಿಸಲು ಕ್ರಮ ಕೈಗೊಳ್ಳುವಂತೆ ಆದೇಶಿಸಲಾಯಿತು.

ರೈತರ ಐಪಿ ಸೆಟ್ ಮತ್ತು ಸಾರ್ವಜನಿಕ ದೂರು : ರೈತರ ಐಪಿ ಸೆಟ್‌ಗಳ ಸಕ್ರಮ ಹಾಗೂ ಬಾಕಿ ಇರುವ ವಿದ್ಯುತ್ ಸಂಪರ್ಕಗಳನ್ನು ಯಾವುದೇ ವಿಳಂಬವಿಲ್ಲದೆ ಶೀಘ್ರವಾಗಿ ವಿಲೇವಾರಿ ಮಾಡಲು ಗಡುವು ನೀಡಲಾಯಿತು. ಸರ್ಕಾರದ ನಿಯಮಾನುಸಾರ ರೈತರ ಕೃಷಿ ಬೆಳೆಗಳಿಗೆ ನೀರು ಒದಗಿಸಲು ಕನಿಷ್ಠ ಏಳು ಗಂಟೆ ವಿದ್ಯುತ್ ಪೂರೈಕೆ ಗೆ ಅಗತ್ಯವಿರುವ ಕ್ರಮಗಳನ್ನು ಕೈಗೊಳ್ಳಬೇಕೆಂದು ಸೂಚನೆ ನೀಡಿದರು.

ಕ್ಯಾತನಹಳ್ಳಿ ಏತ ನೀರಾವರಿ ಯೋಜನೆಗೆ ಸೆಸ್ಕಾಂ ಮತ್ತು ಕೆಪಿಟಿಸಿಎಲ್ ವತಿಯಿಂದ ವಿದ್ಯುತ್ ಪೂರೈಕೆ ಮಾಡಲಾಗುತ್ತಿದ್ದು, ಅಲ್ಲಿ ಹಲವಾರು ವರ್ಷಗಳಿಂದ ಚಾಲನೆ ಇಲ್ಲದೆ ನಿಂತಿದ್ದ ಯಂತ್ರಗಳಿಗೆ ಮರುಜೀವ ತುಂಬುವ ಕೆಲಸ ಮಾಡಲಾಗುತ್ತಿದೆ ಎಂದರು.

ಅ.10 ರಂದು ಯಗಚಿ ನದಿಯಿಂದ ಕೆರೆಗಳಿಗೆ ನೀರು ತುಂಬಿಸುವ ಗುರಿ ಹೊಂದಲಾಗಿದೆ. ಈ ಮೂಲಕ ನೀರಿನ ಸಮಸ್ಯೆಗೆ ತಕ್ಕ ಮಟ್ಟಿಗೆ ಪರಿಹಾರ ದೊರೆಯಲಿದೆ ಎಂದರು.

ಉನ್ನತ ಮಟ್ಟದ ಜಂಟಿ ಪರಿಶೀಲನಾ ಸಭೆಯಲ್ಲಿ ಸೆಸ್ಕಾಂ ಮುಖ್ಯ ಇಂಜಿನಿಯರ್ ಆದಿಶೇಷ, ಕೆಪಿಟಿಸಿಎಲ್ ಅಧೀಕ್ಷಕ ಇಂಜಿನಿಯರ್ ಮಹೇಶ್, ಕಾರ್ಯನಿರ್ವಾಹಕ ಇಂಜಿನಿಯರ್‌ಗಳಾದ ಪ್ರಸನ್ನ ಕೆ.ಕೆ., ಅರ್ಜುನ್ ಜಿ.ಎಂ. ಹಾಗೂ ನಗರಸಭೆಯ ಜಲಮಂಡಳಿ ಕಿರಿಯ ಇಂಜಿನಿಯರ್ ಸುಜಾತಾ ಸೇರಿದಂತೆ ಎರಡೂ ಇಲಾಖೆಗಳ ಸಹಾಯಕ ಕಾರ್ಯನಿರ್ವಾಹಕ ಇಂಜಿನಿಯರ್‌ಗಳು ಮತ್ತು ಸೆಕ್ಷನ್ ಅಧಿಕಾರಿಗಳು ಉಪಸ್ಥಿತರಿದ್ದರು.

# ಗೋವಾದಿಂದ ಬರುತ್ತಿರುವ ಅಕ್ರಮ ಮದ್ಯಕ್ಕೆ ಕಡಿವಾಣ ಹಾಕಿ: ಕೆಎಂಶಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಬೆಂಗಳೂರು: ಸಿಎಸ್‌ಆರ್ ನಿಧಿಯನ್ನು ಪ್ರಮುಖವಾಗಿ ಗ್ರಾಮೀಣ ಪ್ರದೇಶಗಳಲ್ಲಿ ಚರಂಡಿ ಅಭಿವೃದ್ಧಿ ಕಾಮಗಾರಿ ಸೇರಿದಂತೆ ಶಾಲಾ-ಕಾಲೇಜು, ಆಸ್ಪತ್ರೆ, ವೈದ್ಯಕೀಯ ಉಪಕರಣ ಖರೀದಿಗೆ ಬಳಕೆ ಮಾಡಬೇಕು. ಇದರಿಂದ ಸಿಎಸ್‌ಆರ್ ನಿಧಿ ಸಮರ್ಪಕವಾಗಿ ಬಳಕೆಯಾಗಲು ಸಾಧ್ಯ ಎಂದು ಹಾಸನ ಜಿಲ್ಲಾ ಉಸ್ತುವಾರಿ ಸಚಿವರೂ ಆಗಿರುವ ಅಬಕಾರಿ ಸಚಿವ ಕೆ.ಎಂ. ಶಿವಲಿಂಗೇಗೌಡ ಸಲಹೆ ನೀಡಿದರು.

ತಮ್ಮ ಅಧ್ಯಕ್ಷತೆಯಲ್ಲಿ ಸಿಎಸ್‌ಆರ್ ನಿಧಿಯಡಿ



ಕೈಗೊಳ್ಳಬಹುದಾದ ಅಭಿವೃದ್ಧಿ ಕಾರ್ಯಕ್ರಮಗಳಿಗೆ ಸಂಬಂಧಿಸಿದಂತೆ ಇಂದು ವಿಕಾಸ ಸೌಧದಲ್ಲಿ ಡಿಸ್ಟಿಲರಿ ಮಾಲೀಕರು ಹಾಗೂ ಅಧಿಕಾರಿಗಳ ವರ್ಗದ ಜೊತೆಗೆ ಮಹತ್ವದ ಸಭೆ ನಡೆಸಿ ಅವರು ಮಾತನಾಡಿದರು.

# ರಸ್ತೆ ಕಾಮಗಾರಿಗೆ ಭೂಮಿಪೂಜೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸ್ಥಳೀಯ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಬಿಟ್ಟಗೋಡನಹಳ್ಳಿ ಗ್ರಾಮದಲ್ಲಿ CMIDP ಅನುದಾನದಡಿ 25ಲಕ್ಷ ವೆಚ್ಚದ ರಸ್ತೆ ನಿರ್ಮಾಣ ಕಾಮಗಾರಿಗೆ ಶಾಸಕ ಹೆಚ್.ಪಿ.ಸ್ವರೂಪ್ ಪ್ರಕಾಶ್ ಭೂಮಿ ಪೂಜೆ ನೆರವೇರಿಸಿದರು.

ಕಳೆದ ಹಲವು ದಿನಗಳಿಂದ ರಸ್ತೆ, ಸಮಸ್ಯೆ ಬಗ್ಗೆ ಗ್ರಾಮಸ್ಥರು ದೂರು ನೀಡಿದ ಹಿನ್ನೆಲೆ ಗ್ರಾಮಕ್ಕೆ ಅನುಕೂಲ ಕಲ್ಪಿಸುವ ಸಲುವಾಗಿ ಕಾಮಗಾರಿಗೆ ಚಾಲನೆ ನೀಡಲಾಗಿದೆ. ಗುಣಮಟ್ಟದ ಕಾಮಗಾರಿ ಮೂಲಕ ಆದಷ್ಟು ಬೇಗ ಕಾಮಗಾರಿ ಮುಗಿಸಿ ಸಾರ್ವಜನಿಕರಿಗೆ ಅನುಕೂಲ ಕಲ್ಪಿಸಬೇಕು ಎಂದು ಸಂಬಂಧಿಸಿದ ಇಲಾಖೆ ಅಧಿಕಾರಿಗಳು ಹಾಗೂ ಗುತ್ತಿಗೆದಾರರಿಗೆ ಶಾಸಕರು ಸೂಚಿಸಿದರು.

ಈ ಸಂದರ್ಭದಲ್ಲಿ ಸ್ಥಳೀಯರು, ಗ್ರಾಮಸ್ಥರು, ಪಕ್ಷದ ಮುಖಂಡರು, ಕಾರ್ಯಕರ್ತರು, ಹಿರಿಯರು, ಅಧಿಕಾರಿಗಳು ಉಪಸ್ಥಿತರಿದ್ದರು.

# ನೀರಿಗಾಗಿ ಬೃಹತ್ ಪ್ರತಿಭಟನೆ

## ಸೆ.28 ರೊಳಗೆ ನೀರು ಹರಿಸುವ ಭರವಸೆ ನೀಡಿದ ಜಿಲ್ಲಾಧಿಕಾರಿ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಹಾಸನ: ಸಾಲಗಾಮೆ ಹೋಬಳಿ ಕ್ಯಾತನಹಳ್ಳಿ ಏತ ನೀರಾವರಿ ಯೋಜನೆ ಮೊದಲ ಹಂತದ ಮೂಲಕ ರೈತರ ಜಮೀನುಗಳಿಗೆ ತಕ್ಷಣ ನೀರು ಹರಿಸುವಂತೆ ಆಗ್ರಹಿಸಿ ರೈತರಿಂದು ನಗರದಲ್ಲಿ ಬೃಹತ್ ಪ್ರತಿಭಟನೆ ನಡೆಸಿದರು.

ನಗರದ ತಣ್ಣೀರುಹಳ್ಳ ಶ್ರೀ ಶಿವಲಿಂಗೇಶ್ವರ ಮಠದಿಂದ ಆರಂಭವಾದ ರೈತರ ಕಾಲ್ನಡಿಗೆ ಪ್ರತಿಭಟನಾ ಜಾಥಾ, ಬಿ.ಎಂ.ರಸ್ತೆ ಮೂಲಕ ಜಿಲ್ಲಾಧಿಕಾರಿ ಕಚೇರಿ ಆವರಣಕ್ಕೆ ಆಗಮಿಸಿತು.

ರೈತರ ನೀರಿನ ಹೋರಾಟಕ್ಕೆ ಹಳೇಬೀಡು ಪುಷ್ಪಗಿರಿ ಮಠದ ಮಠಾಧೀಶರಾದ ಶ್ರೀ ಸೋಮಶೇಖರ ಶಿವಾಚಾರ್ಯ ಸ್ವಾಮೀಜಿ, ಬಿಜೆಪಿ ರಾಜ್ಯ ಪ್ರಧಾನ ಕಾರ್ಯದರ್ಶಿ ಹಾಗೂ ಮಾಜಿ ಶಾಸಕ ಪ್ರೀತಂ ಜೆ.ಗೌಡ ಸಾಥ್ ನೀಡಿದರು.

ಈ ವೇಳೆ ಮಾತನಾಡಿದ ಹಸಿರುಸೇನೆ-ರೈತ ಸಂಘದ ಜಿಲ್ಲಾಧ್ಯಕ್ಷ ಕಣಗಾಲ್ ಮೂರ್ತಿ, ಇತ್ತೀಚೆಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಂ.ಶಿವಲಿಂಗೇಗೌಡ ಅವರು, ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿ 2 ದಿನಗಳಲ್ಲಿ ನೀರು ಹರಿಸುವ ಭರವಸೆ ನೀಡಿದ್ದರು. ಆದರೆ, ಎರಡು ವಾರ ಕಳೆದರೂ ನೀರು ಹರಿಸಿಲ್ಲ ಎಂದು ಆಕ್ರೋಶ ಹೊರ ಹಾಕಿದರು.

ಯೋಜನೆಯ ಕಾಮಗಾರಿ ತ್ವರಿತಗೊಳಿಸಿ, ಎರಡು ಮೋಟಾರ್ ದುರಸ್ತಿ ಗೊಳಿಸಿ ನೀರು ಹರಿಸುವ ಕಾರ್ಯಕ್ಕೆ ಚಾಲನೆ ನೀಡಬೇಕು, ಇದು ಸಾಕಾರಗೊಂಡರೆ 58 ಕೆರೆ ತುಂಬಲಿವೆ ಎಂದು ಒತ್ತಾಯಿಸಿದರು.

ಯೋಜನೆ ಕಾಮಗಾರಿ ಆರಂಭವಾಗಿ ಹಲವು ವರ್ಷ



ಕಳೆದಿದ್ದರೂ, ಇನ್ನೂ ನೀರು ಹರಿಸಿಲ್ಲ. ಯೋಜನೆ ಭಾಗದ ಕೆರೆಕಟ್ಟೆ ತುಂಬದೆ, ಕೃಷಿ ಚಟುವಟಿಕೆಗಳಿಗೆ ನೀರಿಲ್ಲದೆ ರೈತರು ಸಂಕಷ್ಟಕ್ಕೆ ಸಿಲುಕಿದ್ದಾರೆ ದೂರಿದರು.

ನೀರು ಹರಿಸುವ ಕುರಿತು ಸ್ಪಷ್ಟ ಭರವಸೆ ನೀಡುವವರೆಗೆ ಸ್ಥಳದಿಂದ ತೆರಳುವುದಿಲ್ಲ ಎಂದು ಪಟ್ಟು ಹಿಡಿದರು.

ತಿಂಗಳಾಂತ್ಯದೊಳಗೆ ನೀರು ಹರಿಸದಿದ್ದರೆ ಬೇಲೂರು ರಾಷ್ಟ್ರೀಯ ಹೆದ್ದಾರಿ ಬಂದ್ ಮಾಡಿ ಅನಿರ್ದಿಷ್ಟಾವಧಿ ಪ್ರತಿಭಟನೆ ನಡೆಸುವ ಎಚ್ಚರಿಕೆ ನೀಡಿದರು.

ಹೋರಾಟ ನಿಲ್ಲದಿರಲಿ: ಪ್ರತಿಭಟನೆ ಬೆಂಬಲಿಸಿ ಮಾತನಾಡಿದ ಪುಷ್ಪಗಿರಿ ಸ್ವಾಮೀಜಿ, ಫಲ ಸಿಗುವವರೆಗೂ ನಿಮ್ಮ ಹೋರಾಟ ನಿಲ್ಲಕೂಡದು, ಬರದಿಂದ ನೀರಿಗಾಗಿ ಹೋರಾಟ ಮಾಡುತ್ತೇವೆ ಎಂದರೆ ಪ್ರಜಾಪ್ರಭುತ್ವಕ್ಕೆ ಅರ್ಥವೇ ಇಲ್ಲವಾಗಿದೆ ಎಂದು ವಿಷಾದಿಸಿದರು. ರೈತ ದೇಶದ ಬೆನ್ನೆಲುಬು ಅಂತಾರೆ. ಆದರೆ ರೈತನ ಬೆನ್ನೆಲುಬೇ ಗಟ್ಟಿಯಾಗಿಲ್ಲ. ಸರಕಾರ, ಸಚಿವರ ಭರವಸೆ ನಂಬಿ ಸುಮ್ಮನಾದರೆ ಬೇಡಿಕೆ ಈಡೇರಲ್ಲ. ಇದು ಮನೆಯ ಹೋರಾಟವಲ್ಲ ಎಂದರು.

ಕೆರೆ ಬತ್ತಿದರೆ ರೈತರ ಜೀವನ ಬತ್ತಿದ ಹಾಗೆ, ನೀರಾವರಿ ಯಾರ ಹಕ್ಕಲ್ಲ, ಪ್ರಾಣಿ-ಪಕ್ಷಿ ಜೀವ ಉಳಿಸೋ ಹೋರಾಟ ನಡೆಯಬೇಕು. ಕೆರೆಗೆ ಬಾಗಿನ ಅರ್ಪಿಸಿದಾಗ ನಿಮ್ಮ ಹೋರಾಟ ಯಶಸ್ವಿ ಆದ ಹಾಗೆ, ಹಾಗಾಗಿ ಕಣ್ಣೊರೆಸುವ ತಂತ್ರ ಬಿಟ್ಟು ಶಾಸಕರು, ಅಧಿಕಾರಿಗಳು ಸಮಸ್ಯೆಗೆ ಸ್ಪಂದಿಸಬೇಕೆಂದರು. ಪ್ರತಿಭಟನೆಯಲ್ಲಿ ರೈತ ಸಂಘದ ಮುಖಂಡರಾದ ಬಿಟ್ಟಗೌಡನಹಳ್ಳಿ ಮಂಜು, ಮಾರನಹಳ್ಳಿ, ಶೇಷಣ್ಣ, ನಾಗರಾಜು, ಪಾಲಾಕ್ಷ, ಬಿಜೆಪಿ ಮುಖಂಡರಾದ ಲಲಾಟ್ ಮೂರ್ತಿ, ಪುರುಷೋತ್ತಮ್ ಮೊದಲಾದವರಿದ್ದರು.

### ತಿಂಗಳಾಂತ್ಯದ ಭರವಸೆ

ಧರಣಿ ನಿರತರಿಂದ ಮನವಿ ಸ್ವೀಕರಿಸಿ, ಅವರ ಬೇಡಿಕೆ ಆಲಿಸಿ ಮಾತನಾಡಿದ ಜಿಲ್ಲಾಧಿಕಾರಿ ಕೆ.ಎಸ್.ಲತಾಕುಮಾರಿ, ಈ ತಿಂಗಳ 28 ರೊಳಗೆ ಏತ ನೀರಾವರಿ ಯೋಜನೆಯಿಂದ ನೀರು ಹರಿಸಲು ಅಗತ್ಯ ಕ್ರಮ ಕೈಗೊಳ್ಳ ಲಾಗುವುದು. ಎರಡು ಮೋಟಾರ್ ದುರಸ್ತಿಗೊಳಿಸಿ ನೀರು ಹರಿಸುವ ಕಾರ್ಯಕ್ಕೆ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು. ಈ ಭರವಸೆ ಹಿನ್ನೆಲೆ ರೈತರು ಪ್ರತಿಭಟನೆ ಹಿಂಪಡೆದರು.

### ಜಲಸಂಪನ್ಮೂಲ ಸಚಿವರ ಭರವಸೆ

ಈ ವೇಳೆ ಮಾತನಾಡಿದ ಪ್ರೀತಂಗೌಡ, ತಾವು ಶಾಸಕರಾಗಿದ್ದಾಗ ಈ ಯೋಜನೆಗೆ ಚಾಲನೆ ನೀಡಲಾಗಿತ್ತು. ಆದರೆ, ಕೆಲ ತಾಂತ್ರಿಕ ಕಾರಣಗಳಿಂದಾಗಿ ಕಾಮಗಾರಿ ನೆನೆಗುದಿಗೆ ಬಿದ್ದಿದೆ. ಎಲ್ಲರ ವಿಶ್ವಾಸ ಪಡೆದು ಮೊದಲ ಹಂತದ ಕಾಮಗಾರಿಯನ್ನು ಶೀಘ್ರ ಪೂರ್ಣಗೊಳಿಸಬೇಕು ಎಂದು ಅಧಿಕಾರಿಗಳಿಗೆ ಸೂಚಿಸಿದರು.

ನಂತರ ಜಲಸಂಪನ್ಮೂಲ ಸಚಿವ ಚಲುವರಾಯಸ್ವಾಮಿ ಅವರಿಗೆ ವಿಡಿಯೋ ಕಾಲ್ ಮೂಲಕ ಮಾತನಾಡಿದ ಅವರು, ಯೋಜನೆಯ ವಸ್ತುಸ್ಥಿತಿ ಗಮನಕ್ಕೆ ತಂದರು. ಇದನ್ನು ಕೇಳಿದ ಸಚಿವರು ಶೀಘ್ರ ಯೋಜನೆಗೆ ಚಾಲನೆ ನೀಡುವುದಾಗಿ ಭರವಸೆ ನೀಡಿದರು. ಸೆ.20 ರೊಳಗೆ ರೈತರು ಹಾಗೂ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವುದಾಗಿ ತಿಳಿಸಿದರು.

# ಮಹಾಭಿಷೇಕ ಧಾರ್ಮಿಕ ವಿಧಿವಿಧಾನ



**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಶ್ರವಣಬೆಳಗೊಳ: ದಶಲಕ್ಷಣ ಪರ್ವದ ಅಂಗವಾಗಿ ಇಲ್ಲಿನ ಭವ್ಯ ಚೂಡಾಮಣಿ ಭಂಡಾರಿ ಬಸದಿಯ ಚತುರ್ವಿಂಶತಿ ತೀರ್ಥಂಕರರಿಗೆ ವಿಶೇಷ ಕಲ್ಪಧ್ರುಮ ಮಹಾಭಿಷೇಕ ಧಾರ್ಮಿಕ ವಿಧಿವಿಧಾನಗಳು ಭಕ್ತಿಭಾವದಿಂದ ನೆರವೇರಿತು.

ಶ್ರವಣಬೆಳಗೊಳ ಜೈನ ಮಠದ ಪೀಠಾಧ್ಯಕ್ಷರಾದ ಸ್ವಸ್ತಿಶ್ರೀ ಚಾರುಕೀರ್ತಿ ಭಟ್ಟಾರಕ ಸ್ವಾಮೀಜಿಯವರ ನೇತೃತ್ವದಲ್ಲಿ ಬುಧವಾರ ನಡೆದ ಧಾರ್ಮಿಕ ಕಾರ್ಯಕ್ರಮದಲ್ಲಿ ಭಕ್ತರು ಶ್ರದ್ಧಾಭಕ್ತಿಯಿಂದ ಪಾಲ್ಗೊಂಡರು. ಬೆಳಗ್ಗೆಯಿಂದಲೇ ಬಸದಿಯಲ್ಲಿ ವಿವಿಧ ಪೂಜಾ ವಿಧಿವಿಧಾನಗಳ ಮೂಲಕ ತೀರ್ಥಂಕರರಿಗೆ ವಿಶೇಷ ಆರಾಧನೆ ಸಲ್ಲಿಸಲಾಯಿತು.

ಕಲ್ಪಧ್ರುಮ ಮಹಾಬಿಷೇಕದ ಅಂಗವಾಗಿ ವಿವಿಧ ದ್ರವ್ಯಗಳನ್ನು ಬಳಸಿಕೊಂಡು 24 ತೀರ್ಥಂಕರರ ಮೂರ್ತಿಗಳಿಗೆ ಕ್ರಮಬದ್ಧವಾಗಿ ಅಬಿಷೇಕ ನೆರವೇರಿಸಲಾಯಿತು. ಬಳಿಕ ವಿಶೇಷ ಪೂಜೆ, ಅರ್ಚನೆ ಹಾಗೂ ಧಾರ್ಮಿಕ ವಿಧಿಗಳನ್ನು ನೆರವೇರಿಸಲಾಯಿತು.

ಮದ್ಯಾಹ್ನ ಹುಳ್ಳ ಮಂಟಪದಲ್ಲಿ ಅರಿಹಂತ ಪರಮೇಷ್ಠಿಗಳ ಹಾಗೂ ಮಾತೆ ಜಿನವಾಣಿ ಅಷ್ಟವಿಧಾರ್ಚನೆ ಮೂಜೆ, ತತ್ವಾರ್ಥ ಸೂತ್ರ ವಾಚನ ಮತ್ತು ಅರ್ಥ ವಿವರಣೆ ಹಾಗೂ ಪೂಜ್ಯ ತ್ಯಾಗಿಗಳಿಂದ ಪ್ರವಚನ ನೆರವೇರಿತು. ಸಂಜೆ ಧಾರ್ಮಿಕ ಪ್ರಶ್ನೋತ್ತರ ಹಾಗೂ ಸಂಗೀತಮಯ ಆರತಿ ಕಾರ್ಯಕ್ರಮಗಳು ಸಂಪನ್ನಗೊಂಡವು.

ಕಾರ್ಯಕ್ರಮದಲ್ಲಿ ಮುನಿಶ್ರೀ ಸುದೇಯಸಾಗರ ಮಹಾರಾಜರು, ಮುನಿಶ್ರೀ ಪ್ರಭಾಕರಸಾಗರ ಮಹಾರಾಜರು, ಆರ್ಯಿಕಾಶ್ರೀ ಶಿವಮತಿ ಮಾತಾಜಿ, ಆರ್ಯಿಕಾಶ್ರೀ ನಿರ್ಮಲಮತಿ ಮಾತಾಜಿ, ಕ್ಷುಲ್ಲಿಕಾಶ್ರೀ ವಿಶುದ್ಧಮತಿ ಮಾತಾಜಿ, ಕ್ಷುಲ್ಲಿಕಾಶ್ರೀ ಅಮರಜ್ಯೋತಿ ಮಾತಾಜಿ, ಕ್ಷುಲ್ಲಿಕಾಶ್ರೀ ಅಮೃತಜ್ಯೋತಿ ಮಾತಾಜಿ ಹಾಗೂ ಕ್ಷುಲ್ಲಕಶ್ರೀ ಪರಮಾನಂದಸಾಗರ ಮಹಾರಾಜರು ಪಾವನ ಸಾನಿಧ್ಯ ವಹಿಸಿದ್ದರು.

# ಗಣಪತಿ ವಿಸರ್ಜನೆ ವೇಳೆ ಧ್ವನಿವರ್ಧಕಕ್ಕೆ ಬ್ರೇಕ್




**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ (Kannada Post): ಗಣಪತಿ ವಿಸರ್ಜನಾ ಮೆರವಣಿಗೆ ವೇಳೆ ಧ್ವನಿವರ್ಧಕ (Loudspeaker) ಬಳಕೆಗೆ ಪೊಲೀಸರು ಅಡ್ಡಿಪಡಿಸಿದ್ದರಿಂದ ರೊಚ್ಚಿಗೆದ್ದ ಗ್ರಾಮಸ್ಥರು, ರಸ್ತೆ ಮಧ್ಯೆಯೇ ಗಣಪತಿ ಮೂರ್ತಿ ಬಿಟ್ಟು ತೆರಳಿದ ಘಟನೆ ಸಕಲೇಶಪುರ ತಾಲ್ಲೂಕಿನ ಮಾರನಹಳ್ಳಿ ಗ್ರಾಮದಲ್ಲಿ ನಡೆದಿದೆ. ನಂತರ ಗ್ರಾಮಸ್ಥರ ಪಟ್ಟು ಸಡಿಲಿಸದ ಕಾರಣ ಎಚ್ಚೆತ್ತ ಪೊಲೀಸ್ ಇಲಾಖೆ ಧ್ವನಿವರ್ಧಕಕ್ಕೆ ಅನುಮತಿ ನೀಡಿದ್ದು, ಮೆರವಣಿಗೆ ಪುನರಾರಂಭಗೊಂಡಿದೆ.

ನಡೆದಿದ್ದೇನು?

ಮಾರನಹಳ್ಳಿಯಲ್ಲಿ ಹಲವು ವರ್ಷಗಳಿಂದ ಗೌರಿ-ಗಣಪತಿಯನ್ನು ಪ್ರತಿಷ್ಠಾಪಿಸಿಕೊಂಡು ಬರಲಾಗುತ್ತಿದೆ. ಅದರಂತೆ ಈ ವರ್ಷವೂ ಅದ್ದೂರಿಯಾಗಿ ಮೂರ್ತಿ ಪ್ರತಿಷ್ಠಾಪಿಸಲಾಗಿತ್ತು. ವಿಜೃಂಭಣೆಯಿಂದ ಮೆರವಣಿಗೆ ಮಾಡಿ ವಿಸರ್ಜನೆ ಮಾಡಲು ಗ್ರಾಮಸ್ಥರು ಮುಂದಾಗಿದ್ದರು. ಟ್ರ್ಯಾಕ್ಟರ್‌ನಲ್ಲಿ ಧ್ವನಿವರ್ಧಕಗಳನ್ನು ಅಳವಡಿಸಿಕೊಂಡು ಸಡಗರದಿಂದ ಮೆರವಣಿಗೆ ನಡೆಸಲಾಗುತ್ತಿತ್ತು.

ಪೊಲೀಸರ ಅಡ್ಡಿ, ಗ್ರಾಮಸ್ಥರ ಆಕ್ರೋಶ:

ಈ ವೇಳೆ ಸ್ಥಳಕ್ಕೆ ಬಂದ ಸಕಲೇಶಪುರ ಗ್ರಾಮಾಂತರ ಠಾಣೆ ಪೊಲೀಸರು ಮೆರವಣಿಗೆಯನ್ನು ತಡೆದು, ಧ್ವನಿವರ್ಧಕ ಬಳಕೆಗೆ ಅನುಮತಿ ನೀಡುವುದಿಲ್ಲ ಎಂದು ಅಡ್ಡಿಪಡಿಸಿದ್ದಾರೆ. ಪೊಲೀಸರ ಈ ದಿಢೀರ್ ಕ್ರಮದಿಂದ ನೂರಾರು ಗ್ರಾಮಸ್ಥರು ಕೆರಳಿದ್ದಾರೆ. ಪಟ್ಟು ಬಿಡದ ಗ್ರಾಮಸ್ಥರು ಮೆರವಣಿಗೆಯನ್ನು ಅರ್ಧಕ್ಕೇ ನಿಲ್ಲಿಸಿ, ಗೌರಿ-ಗಣಪತಿ ವಿಗ್ರಹವಿದ್ದ ಟ್ರ್ಯಾಕ್ಟರ್ ಅನ್ನು ರಸ್ತೆ ಬದಿಯಲ್ಲೇ ಬಿಟ್ಟು ತೆರಳಿದ್ದಾರೆ. ಇದರಿಂದಾಗಿ ಗಣಪತಿ ಮೂರ್ತಿಯು ರಸ್ತೆ ಬದಿಯಲ್ಲಿಯೇ ಅನಾಥವಾದ ಸ್ಥಿತಿ ನಿರ್ಮಾಣವಾಗಿತ್ತು.

ಒತ್ತಾಯಕ್ಕೆ ಮಣಿದ ಪೊಲೀಸ್ ಇಲಾಖೆ:

ಗ್ರಾಮಸ್ಥರ ಆಕ್ರೋಶ ಹಾಗೂ ಪರಿಸ್ಥಿತಿ ವಿಕೋಪಕ್ಕೆ ಹೋಗುತ್ತಿರುವುದನ್ನು ಅರಿತ ಪೊಲೀಸ್ ಇಲಾಖೆ, ಅಂತಿಮವಾಗಿ ಗ್ರಾಮಸ್ಥರ ಒತ್ತಾಯಕ್ಕೆ ಮಣಿದು ಮೆರವಣಿಗೆಯಲ್ಲಿ ಧ್ವನಿವರ್ಧಕ ಬಳಕೆಗೆ ಅನುಮತಿ ನೀಡಿದೆ.

ಪೊಲೀಸರು ಅನುಮತಿ ನೀಡುತ್ತಿದ್ದಂತೆ ಮರಳಿ ಬಂದ ಗ್ರಾಮಸ್ಥರು, ಅರ್ಧಕ್ಕೆ ನಿಂತಿದ್ದ ವಿಸರ್ಜನಾ ಮೆರವಣಿಗೆಯನ್ನು ಪುನರಾರಂಭಿಸಿದರು. ಪ್ರಸ್ತುತ ಕಲಾತಂಡಗಳು ಹಾಗೂ ಧ್ವನಿವರ್ಧಕದ ಅಬ್ಬರದೊಂದಿಗೆ ಅದ್ದೂರಿಯಾಗಿ ಮೆರವಣಿಗೆ ಸಾಗುತ್ತಿದ್ದು, ನೂರಾರು ಮಂದಿ ಗ್ರಾಮಸ್ಥರು ಖುಷಿಯಿಂದ ಹೆಜ್ಜೆ ಹಾಕುತ್ತಿದ್ದಾರೆ. ಇದರೊಂದಿಗೆ ಮಾರನಹಳ್ಳಿಯಲ್ಲಿ ನಡೆದಿದ್ದ ಧ್ವನಿವರ್ಧಕ ಜಟಾಪಟಿ ಸುಖಾಂತ್ಯ ಕಂಡಿದೆ.

# ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ: ಕ್ರೀಡಾಂಗಣಗಳ ಅಭಿವೃದ್ಧಿ ಹಾಗೂ ಕ್ರೀಡಾಪಟುಗಳಿಗೆ ಅಗತ್ಯ ಮೂಲಸೌಕರ್ಯ ಒದಗಿಸುವ ನಿಟ್ಟಿನಲ್ಲಿ ಸರ್ಕಾರವು 100 ಕೋಟಿ ಹಣವನ್ನು ವಿಶೇಷವಾಗಿ ಮೀಸಲಿಡಬೇಕು ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಒತ್ತಾಯಿಸಿದರು.

ಪಟ್ಟಣದ ತಾಲೂಕು ಕ್ರೀಡಾಂಗಣದಲ್ಲಿ ನಡೆದ ತಾಲೂಕು ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ, ಕ್ಷೇತ್ರ ಸಮನ್ವಯ ಅಧಿಕಾರಿಗಳ ಕಚೇರಿ ಹಾಗೂ ತಾಲ್ಲೂಕು ಪ್ರಾಥಮಿಕ ಶಾಲಾ ದೈಹಿಕ ಶಿಕ್ಷಣ ಶಿಕ್ಷಕರ ಸಂಘ ಇವರ ಸಂಯುಕ್ತಾಶ್ರಯದಲ್ಲಿ ಪ್ರಸಕ್ತ ಸಾಲಿನ 14 ವರ್ಷ ವಯೋಮಾನದ ಒಳಗಿನ ವಿದ್ಯಾರ್ಥಿಗಳ ತಾಲೂಕು ಮಟ್ಟದ ಕ್ರೀಡಾಕೂಟಕ್ಕೆ ಚಾಲನೆ ನೀಡಿ ಮಾತನಾಡಿದರು.

ಅನೇಕ ಕ್ರೀಡಾಂಗಣಗಳಲ್ಲಿ ಕ್ರೀಡಾಪಟುಗಳಿಗೆ ಅಗತ್ಯವಾದ ತರಬೇತಿ ಸೌಲಭ್ಯ, ಉತ್ತಮ ಮೈದಾನ, ಕುಡಿಯುವ ನೀರು, ಶೌಚಾಲಯ, ಬೆಳಕಿನ ವ್ಯವಸ್ಥೆ ಹಾಗೂ ಕ್ರೀಡಾ ಉಪಕರಣಗಳ ಕೊರತೆ ಇದೆ. ಇಂತಹ ಸಂದರ್ಭದಲ್ಲಿ ಇಡೀ ರಾಜ್ಯದ ಕ್ರೀಡಾಂಗಣಗಳ ಅಭಿವೃದ್ಧಿಗೆ ?14 ಕೋಟಿ ಅನುದಾನ ಮೀಸಲಿಡುವುದು ಅತ್ಯಂತ ಕಡಿಮೆ ಮೊತ್ತವಾಗಿದೆ. ಕ್ರೀಡಾಂಗಣಗಳು ಸೂಕ್ತ ನಿರ್ವಹಣೆ ಹಾಗೂ ಮೂಲಸೌಕರ್ಯದ ಕೊರತೆಯಿಂದ ಬಳಲುತ್ತಿವೆ ಎಂದರು.

ಗ್ರಾಮೀಣ ಪ್ರದೇಶಗಳ ಕ್ರೀಡಾಪಟುಗಳಿಗೆ ಸಮರ್ಪಕ ತರಬೇತಿ ಹಾಗೂ ಅಭ್ಯಾಸದ



ಅವಕಾಶ ಕಲ್ಪಿಸಲು ಸುಸಜ್ಜಿತ ಕ್ರೀಡಾಂಗಣಗಳ ಅಗತ್ಯವಿದೆ. ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡುವುದರಿಂದ ಗ್ರಾಮೀಣ ಪ್ರತಿಭೆಗಳನ್ನು ಗುರುತಿಸಿ, ಅವರಿಗೆ ಸೂಕ್ತ ತರಬೇತಿ ನೀಡುವ ಮೂಲಕ ರಾಜ್ಯ ಮತ್ತು ರಾಷ್ಟ್ರಮಟ್ಟದಲ್ಲಿ ಉತ್ತಮ ಸಾಧನೆ ಮಾಡಲು ಅವಕಾಶ ಕಲ್ಪಿಸಬಹುದು. ಆದ್ದರಿಂದ ಸರ್ಕಾರವು ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಬಜೆಟ್‌ನಲ್ಲಿ ?100 ಕೋಟಿ ಅನುದಾನ ಮೀಸಲಿಡಬೇಕು ಎಂದು ಮನವಿ ಮಾಡಿದರು.

ಕ್ರೀಡಾ ಮೂಲಸೌಕರ್ಯಗಳ ಅಭಿವೃದ್ಧಿಗೆ ಸರ್ಕಾರ ಮುಂದಾದರೆ ರಾಜ್ಯದ ಯುವಜನರಲ್ಲಿ ಕ್ರೀಡೆಯ ಬಗ್ಗೆ ಹೆಚ್ಚಿನ ಆಸಕ್ತಿ ಮೂಡಲಿದ್ದು, ಉತ್ತಮ ಕ್ರೀಡಾಪಟುಗಳನ್ನು ರೂಪಿಸಲು ಸಹಕಾರಿಯಾಗಲಿದೆ. ಕ್ರೀಡಾಂಗಣಗಳ ಅಭಿವೃದ್ಧಿಗೆ ಮೀಸಲಿಡುವ ಅನುದಾನವನ್ನು ಹೊಸ ಕ್ರೀಡಾ ಮೈದಾನಗಳ ನಿರ್ಮಾಣ, ಹಳೆಯ ಕ್ರೀಡಾಂಗಣಗಳ ನವೀಕರಣ, ಆಟದ ಸಲಕರಣೆಗಳ ಖರೀದಿ, ಒಳಾಂಗಣ ಕ್ರೀಡಾ ಸೌಲಭ್ಯಗಳ ನಿರ್ಮಾಣ ಸೇರಿದಂತೆ ವಿವಿಧ ಕಾಮಗಾರಿಗಳಿಗೆ ಬಳಸಬಹುದು ಎಂದು ತಿಳಿಸಿದರು.

ಕ್ರೀಡಾ ಕ್ಷೇತ್ರಕ್ಕೆ ಹೆಚ್ಚಿನ ಆದ್ಯತೆ ನೀಡಿ ಕ್ರೀಡಾಪಟುಗಳಿಗೆ ಗುಣಮಟ್ಟದ ತರಬೇತಿ ಹಾಗೂ ಉತ್ತಮ ಮೂಲಸೌಕರ್ಯ ಒದಗಿಸಿದಾಗ ಮಾತ್ರ ರಾಜ್ಯದಿಂದ ರಾಷ್ಟ್ರಮಟ್ಟ ಹಾಗೂ ಅಂತರರಾಷ್ಟ್ರೀಯ ಮಟ್ಟದ ಪ್ರತಿಭೆಗಳನ್ನು ಬೆಳೆಸಲು ಸಾಧ್ಯ, ಆದ್ದರಿಂದ ಸರ್ಕಾರವು ಈ ಬೇಡಿಕೆಯನ್ನು ಗಂಭೀರವಾಗಿ ಪರಿಗಣಿಸಿ, ಕ್ರೀಡಾಂಗಣಗಳ ಅಭಿವೃದ್ಧಿಗೆ ಬಜೆಟ್‌ನಲ್ಲಿ ?100 ಕೋಟಿ ಅನುದಾನ ಮೀಸಲಿಡಬೇಕು ಎಂದರು.

ಮಕ್ಕಳ ದೈಹಿಕ ಮತ್ತು ಮಾನಸಿಕ ಬೆಳವಣಿಗೆಯಲ್ಲಿ ಕ್ರೀಡೆಗಳು ಮಹತ್ವದ ಪಾತ್ರ ವಹಿಸುತ್ತವೆ. ಆದ್ದರಿಂದ ವಿದ್ಯಾರ್ಥಿಗಳು ಪಾಠದೊಂದಿಗೆ ಪಠ್ಯೇತರ ಚಟುವಟಿಕೆಗಳಲ್ಲಿ ಕೂಡ ಶಿಕ್ಷಣದಷ್ಟೇ ಆದ್ಯತೆ ಕ್ರೀಡೆಗಳಿಗೂ ಇರಬೇಕು. ಯುವ ಪ್ರತಿಭೆಗಳು ಶಾಲಾ ಕಾಲೇಜುಗಳಲ್ಲಿ ಆಯೋಜಿಸುವ ಕ್ರೀಡೆಗಳಲ್ಲಿ ಭಾಗವಹಿಸುವ ಮೂಲಕ ರಾಜ್ಯ, ರಾಷ್ಟ್ರೀಯ ಮಟ್ಟದಲ್ಲಿ ಸಾಧನೆ ಮಾಡುವ ಸಾಮರ್ಥ್ಯವನ್ನು ಬೆಳೆಸಿಕೊಳ್ಳಬೇಕು ಎಂದು ಸಲಹೆ ನೀಡಿದರು.

ಈ ಕ್ರೀಡೆಯಲ್ಲಿ ರಾಜ್ಯಮಟ್ಟವನ್ನು ಪ್ರತಿನಿಧಿಸುವವರಿಗೆ ವಿಶೇಷ ನೆರವು ನೀಡಲಾಗುವುದು. ಮಕ್ಕಳ ಆಸಕ್ತಿಯನ್ನು ಗಮನಿಸಿ ಶಿಕ್ಷಕರು ಅವರನ್ನು ಪ್ರೋತ್ಸಾಹಿಸಬೇಕು. ಕ್ರೀಡೆಯಲ್ಲಿ ಎಲ್ಲರೂ ಗೆಲ್ಲಲು ಸಾಧ್ಯವಿಲ್ಲ. ಸೋಲು ಯಾವುದೇ ಕಾರಣಕ್ಕೂ ನಿರಾಶೆ ಉಂಟು ಮಾಡದೇ ಪುನಃ ಗೆಲ್ಲುವ ಛಲ ಹುಟ್ಟಿಸಬೇಕು' ಎಂದು ತಿಳಿಸಿದರು.

ಕ್ಷೇತ್ರ ಶಿಕ್ಷಣಾಧಿಕಾರಿ ಎಚ್.ಎನ್.ದೀಪಾ ಮಾತನಾಡಿ, ಕ್ರೀಡಾಕೂಟದ ಬಹುಮಾನ, ಮಕ್ಕಳಿಗೆ ಮಧ್ಯಾಹ್ನದೂಟದ ಪ್ರಾಯೋಜಕತ್ವವನ್ನು ಶಾಸಕ ಸಿ.ಎನ್.ಬಾಲಕೃಷ್ಣ ಅವರೇ ಮಾಡಿದ್ದು ಇದರಿಂದ ಇಲಾಖೆ ಯಶಸ್ವಿಯಾಗಿ ಕ್ರೀಡಾಕೂಟ ಆಯೋಜಿಸಲು ಸಹಕಾರಿಯಾಗಿದೆ ಎಂದರು.

ಕ್ರೀಡಾಕೂಟದಲ್ಲಿ ಕ್ಷೇತ್ರ ಸಂಪನ್ಮೂಲ ಸಮನ್ವಯಾಧಿಕಾರಿ ಕೆ.ಎನ್.ಅನಿಲ್, ತಾಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಕೆ.ಡ ಆನಂದ್ ತಾಲೂಕು ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಸಿ.ಎನ್.ಗೋಪಾಲ್, ಜಿಲ್ಲಾ ಪ್ರಧಾನ ಕಾರ್ಯದರ್ಶಿ ವಿ.ಜಿ.ದ್ಯಾವೇಗೌಡ, ಪ್ರಧಾನ ಕಾರ್ಯದರ್ಶಿ ಸಿ.ಆರ್. ಮಂಜುನಾಥ್, ಸರ್ಕಾರಿ ನೌಕರರ ಸಂಘದ ರಾಜ್ಯ ಪರಿಷತ್ ಸದಸ್ಯ ಪ್ರಮೋದ್, ಕ್ರೀಡಾಕೂಟದ ಸಂಘಟನಾ ಅಧ್ಯಕ್ಷ ಬಿ ಎನ್ ಶ್ರೀನಿವಾಸಮೂರ್ತಿ ಸಂಘಟನಾ ಕಾರ್ಯದರ್ಶಿ ಡಿ.ಆರ್.ಪುಷ್ಪ, ಖಜಾಂಚಿ ಪದ್ಮಿನಿ, ಶಿಕ್ಷಣ ಸಂಯೋಜಕ ಜೆ.ಇ.ಲೋಕೇಶ್, ಸಮೂಹ ಸಂಪನ್ಮೂಲ ವ್ಯಕ್ತಿಗಳು ಶಿಕ್ಷಕರ ಸಂಘದ ಪದಾಧಿಕಾರಿಗಳು, ದೈಹಿಕ ಶಿಕ್ಷಕರು ಸೇರಿದಂತೆ 500 ಕ್ಕೂ ಹೆಚ್ಚು ಕ್ರೀಡಾಪಟುಗಳು ಭಾಗವಹಿಸಿದ್ದರು.

# ದಶಕಗಳ ರಸ್ತೆ ಕನಸಿಗೆ ಸಿಮೆಂಟ್ ಮಂಜು ಚಾಲನೆ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಸಕಲೇಶಪುರ: ಹೆತ್ತೂರು ಹೋಬಳಿಯ ವಳಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಚೀರಿಚಿನ್ನಳ್ಳಿ ಗ್ರಾಮದ ಜನರ ಬಹುವರ್ಷಗಳ ರಸ್ತೆ ಬೇಡಿಕೆಗೆ ಕೊನೆಗೂ ಸ್ಪಂದನೆ ದೊರೆತಿದ್ದು, ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಸಿಮೆಂಟ್ ಮಂಜು ಭೂಮಿಪೂಜೆ ನೆರವೇರಿಸಿದರು.

ಈ ವೇಳೆ ಮಾತನಾಡಿದ ಶಾಸಕ ಸಿಮೆಂಟ್ ಮಂಜು, ಚೀರಿಚಿನ್ನಳ್ಳಿ ಭಾಗದ ರಸ್ತೆ ಹಾಗೂ ಸೇತುವೆ ನಿರ್ಮಾಣಕ್ಕೆ ಹಲವು ವರ್ಷಗಳಿಂದ ಬೇಡಿಕೆ ಇತ್ತು. ತಾವು ಶಾಸಕನಾಗುವುದಕ್ಕೂ ಮೊದಲಿನಿಂದಲೂ ಸ್ಥಳೀಯ ಮುಖಂಡರು ಹಾಗೂ ಗ್ರಾಮಸ್ಥರು ಈ ಬಗ್ಗೆ ನಿರಂತರವಾಗಿ ಒತ್ತಾಯಿಸುತ್ತಿದ್ದರು. ಇದೀಗ ಕಾಮಗಾರಿಗೆ ಚಾಲನೆ ದೊರೆತಿರುವುದು ಸಂತಸದ ಸಂಗತಿ ಎಂದರು.

''ಈ ರಸ್ತೆ ಕೇವಲ ಗ್ರಾಮಸ್ಥರ ಸಂಚಾರಕ್ಕೆ ಮಾತ್ರವಲ್ಲದೆ, ರೈತರ ಕೃಷಿ ಚಟುವಟಿಕೆ ಹಾಗೂ ಸಕಲೇಶಪುರ ನಗರಕ್ಕೆ ಸಂಪರ್ಕ ಕಲ್ಪಿಸುವ ದೃಷ್ಟಿಯಿಂದಲೂ ಮಹತ್ವದ್ದಾಗಿದೆ. ಕಾಮಗಾರಿ ಆದಷ್ಟು ಬೇಗ ಆರಂಭಗೊಂಡು ಗುಣಮಟ್ಟದಿಂದ ಪೂರ್ಣಗೊಳ್ಳಬೇಕು. ಇದರಿಂದ ಈ ಭಾಗದ ರೈತರು ಹಾಗೂ ಸಾರ್ವಜನಿಕರಿಗೆ ಅನುಕೂಲವಾಗಲಿದೆ,'' ಎಂದು ಹೇಳಿದರು.



ವಳಲಹಳ್ಳಿ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗೆ 9 ಕೋಟಿಗೂ ಅಧಿಕ ಅನುದಾನ ಒದಗಿಸಲಾಗುತ್ತಿದೆ. ಈಗಾಗಲೇ ಕೆಲವು ಕಾಮಗಾರಿಗಳಿಗೆ ಭೂಮಿಪೂಜೆ ನೆರವೇರಿಸಲಾಗಿದ್ದು, ಉಳಿದ ಕಾಮಗಾರಿಗಳಿಗೂ ಹಂತ ಹಂತವಾಗಿ ಚಾಲನೆ ನೀಡಲಾಗುವುದು. ರಸ್ತೆ ಸೇರಿದಂತೆ ಅಗತ್ಯ ಮೂಲಸೌಕರ್ಯ ಅಭಿವೃದ್ಧಿಗೆ ಆದ್ಯತೆ ನೀಡಲಾಗುತ್ತಿದೆ ಎಂದು ತಿಳಿಸಿದರು.

''ವಿಧಾನಸಭಾ ಕ್ಷೇತ್ರದ ಕಟ್ಟಕಡೆಯ ಗ್ರಾಮವೂ ಮೂಲಸೌಕರ್ಯದಿಂದ ವಂಚಿತವಾಗಬಾರದು ಎಂಬುದು ನಮ್ಮ ಉದ್ದೇಶ. ಅನುದಾನ ಲಭ್ಯತೆಯ ಆಧಾರದಲ್ಲಿ ಇನ್ನಷ್ಟು ಅಭಿವೃದ್ಧಿ ಕಾಮಗಾರಿಗಳನ್ನು ಕೈಗೆತ್ತಿಕೊಳ್ಳಲಾಗುವುದು. ಗ್ರಾಮಸ್ಥರ ಸಹಕಾರ ಮತ್ತು ಆಶೀರ್ವಾದ ಮುಂದೆಯೂ ಇರಲಿ,'' ಎಂದು ಶಾಸಕ ಸಿಮೆಂಟ್ ಮಂಜು ಮನವಿ ಮಾಡಿದರು.

**'ಗೌರಿಗಣೇಶ ಹಬ್ಬಕ್ಕೆ ಡಬಲ್ ಸಂಭ್ರಮ'**

ಚೀರಿಚಿನ್ನಳ್ಳಿ ಗ್ರಾಮಸ್ಥರು ಮಾತನಾಡಿ, ''ಈ ಬಾರಿಯ ಗೌರಿಗಣೇಶ ಹಬ್ಬ ನಮಗೆ ಡಬಲ್ ಸಂಭ್ರಮ ತಂದಿದೆ. ಈ ರಸ್ತೆ ಹಲವು ವರ್ಷಗಳ ಹೋರಾಟದ ಫಲ. ಗ್ರಾಮಸ್ಥರು ನಿರಂತರವಾಗಿ ರಸ್ತೆ ನಿರ್ಮಾಣಕ್ಕೆ ಒತ್ತಾಯಿಸಿಕೊಂಡು ಬಂದಿದ್ದು, ಇದೀಗ ಆ ಕನಸು ನನಸಾಗುತ್ತಿದೆ,'' ಎಂದು ಸಂತಸ ವ್ಯಕ್ತಪಡಿಸಿದರು.

''ಕ್ಷೇತ್ರದ ಕಟ್ಟಕಡೆಯ ಗ್ರಾಮಗಳಿಗೂ ಮೂಲಸೌಕರ್ಯ ತಲುಪಬೇಕು ಎಂಬ ಉದ್ದೇಶದಿಂದ ಶಾಸಕರು ಕೆಲಸ ಮಾಡುತ್ತಿದ್ದಾರೆ. ನಮ್ಮ ಪುಟ್ಟ ಗ್ರಾಮಕ್ಕೆ ವಿವಿಧ ಅಭಿವೃದ್ಧಿ ಕಾಮಗಾರಿಗಳಿಗಾಗಿ ಸುಮಾರು 3.5 ಕೋಟಿ ಅನುದಾನ ಒದಗಿಸಿದ್ದಾರೆ. ಈಗಾಗಲೇ ಒಂದು ರಸ್ತೆ ಕಾಮಗಾರಿ ನಡೆದಿದ್ದು, ಮತ್ತೊಂದು ರಸ್ತೆ ಕಾಮಗಾರಿಗೂ ಚಾಲನೆ ಸಿಗುತ್ತಿದೆ. ಮುಂದಿನ ದಿನಗಳಲ್ಲಿ ಉಳಿದ ಬೇಡಿಕೆಗಳಿಗೂ ಅನುದಾನ ಒದಗಿಸುವ ಭರವಸೆ ನೀಡಿದ್ದಾರೆ,'' ಎಂದು ಗ್ರಾಮಸ್ಥರು ತಿಳಿಸಿ, ಶಾಸಕ ಸಿಮೆಂಟ್ ಮಂಜು ಅವರಿಗೆ ಕೃತಜ್ಞತೆ ಸಲ್ಲಿಸಿದರು.

ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ವಳಲಹಳ್ಳಿ ಅಶ್ವಥ್, ಮಹಾಶಕ್ತಿ ಕೇಂದ್ರದ ಅಧ್ಯಕ್ಷ ರಾಜೇಗೌಡ, ಶಕ್ತಿ ಕೇಂದ್ರದ ಅಧ್ಯಕ್ಷ ಗಿರೀಶ್ ಗ್ರಾಮದ ಮುಖಂಡ ಲಕ್ಷ್ಮಣ್ ಗೌಡ ಸೇರಿದಂತೆ ಮುಂತಾದವರು ಉಪಸ್ಥಿತರಿದ್ದರು.

# ಹಣಕ್ಕಿಂತ ಆರೋಗ್ಯ ಸಂಪಾದನೆ ಮುಖ್ಯ : ಸಿ.ಎನ್.ಬಾಲಕೃಷ್ಣ

**ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್**

ಚನ್ನರಾಯಪಟ್ಟಣ : ಹಣ ಹಾಗೂ ಆಸ್ತಿ ಸಂಪಾದನೆಯ ಬರದಲ್ಲಿ ಮನುಷ್ಯನು ತನ್ನ ಆರೋಗ್ಯವನ್ನು ಮರೆಯುತ್ತಿದ್ದಾನೆ ಎಂದು ಶಾಸಕ ಸಿ.ಎನ್.ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಉಳ್ಳಾವಳ್ಳಿ ಗ್ರಾಮದಲ್ಲಿ ಆಯುಷ್ಮಾನ್ ಸ್ವಾಸ್ಥ್ಯ ಆರೋಗ್ಯ ಕೇಂದ್ರದ ಕಟ್ಟಡ ನಿರ್ಮಾಣ ಕಾಮಗಾರಿ ಸೇರಿದಂತೆ ಒಟ್ಟು 65 ಲಕ್ಷ ರೂ. ವೆಚ್ಚದ ವಿವಿಧ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸಿ ಮಾತನಾಡಿ, ಹಣಕ್ಕಿಂತ ಆರೋಗ್ಯ ಸಂಪಾದನೆ ಮುಖ್ಯ ಎಂಬುದನ್ನು ಮನಗಾಣಬೇಕಿದೆ ಎಂದರು.

ಪೂರ್ವ ಕಾಲದಲ್ಲಿ ಪ್ಲೇಗ್, ಮಲೇರಿಯಾ, ಕಾಲರ, ಸಿಡುಬು ಹಾಗೂ ಆಮಶಂಕೆ ಸೇರಿದಂತೆ ಬೆರಳೆಣಿಕೆಷ್ಟು ಕಾಯಿಲೆಗಳು ಮಾತ್ರ ಕಾಣಿಸಿಕೊಳ್ಳುತ್ತಿದ್ದವು. ಆದರೆ ಆಧುನಿಕ ಜಗತ್ತು ಬೆಳೆದಂತೆಲ್ಲ ಆಹಾರ ಪದ್ಧತಿ ಹಾಗೂ ಜೀವನ ಶೈಲಿಯ ಬದಲಾವಣೆ



ಪರಿಣಾಮ ಸಾವಿರಾರು ಕಾಯಿಲೆಗಳು ಸೃಷ್ಟಿಯಾಗುತ್ತಿವೆ ಎಂದು ಆತಂಕ ವ್ಯಕ್ತಪಡಿಸಿದರು.

ಕೃಷಿ ಚಟುವಟಿಕೆಯಲ್ಲಿ ಆಧುನಿಕ ತಂತ್ರಜ್ಞಾನಗಳು ಕಾಲಿಟ್ಟ ಬಳಿಕ ಮೂಲ ಕೃಷಿ ಪದ್ಧತಿಯೊಂದಿಗೆ ಹಗಲಿರುಳು ದುಡಿಯುವ ಕಾಲ ಕಣ್ಮರೆಯಾಗುತ್ತಿದೆ. ಕುಳಿತಲ್ಲಿಯೇ ಎಲ್ಲಾ ಕೆಲಸಗಳು ಸುಲಭ ಸಾಧ್ಯ ಎನಿಸುತ್ತಿದ್ದಂತೆಯೇ ದೇಹಕ್ಕೆ ಇನ್ನಿಲ್ಲದ ದುಷ್ಪರಿಣಾಮಗಳು ತಲೆದೋರುತ್ತಿದ್ದು ನೆಮ್ಮದಿಯ ಬದುಕು ಕಣ್ಮರೆಗೆ ಸರಿಯುತ್ತಿವೆ ಎಂದು ಕಳವಳ ವ್ಯಕ್ತಪಡಿಸಿದರು. ಪ್ರತಿದಿನ ಬೆಳಗ್ಗೆ ಕಾಲ್ನಡಿಗೆ ಹಾಗೂ ಯೋಗ-ಧ್ಯಾನ ಮಾಡುವ ಮೂಲಕ ತಮ್ಮ ಆರೋಗ್ಯವನ್ನು ಕಾಪಾಡಿಕೊಳ್ಳಬೇಕು. ಜಮೀನಿನಲ್ಲಿ ಸಾಧ್ಯವಾದಷ್ಟು ಕೃಷಿ ಚಟುವಟಿಕೆಯಲ್ಲಿ ತೊಡಗಿಕೊಳ್ಳಬೇಕು. ಪೌಷ್ಟಿಕಾಂಶ ಹೊಂದಿರುವ ತಾಜಾ ತರಕಾರಿಗಳಿಂದ ಸಿದ್ಧಪಡಿಸಿದ ಆಹಾರಗಳ ಸೇವನೆಯೊಂದಿಗೆ ಶುದ್ಧ ಕುಡಿಯುವ ನೀರಿನ ಬಳಕೆ ಅಗತ್ಯ ಎಂದು ಸಲಹೆ ನೀಡಿದರು.

ಗ್ರಾಮದಲ್ಲಿ ನಿರ್ಮಾಣ ಹಂತದಲ್ಲಿರುವ ಶ್ರೀ ಆಂಜನೇಯ ಸ್ವಾಮಿ ದೇಗುಲಕ್ಕೆ 2 ಲಕ್ಷ ರೂ. ಹಾಗೂ ಈಗಾಗಲೇ ನಿರ್ಮಾಣಗೊಂಡಿರುವ ಶ್ರೀ ಗಣಪತಿ ಮಂದಿರಕ್ಕೆ 3 ಲಕ್ಷ ರೂ. ದೇಣಿಗೆ ನೀಡಲಾಗುವುದು. ಗ್ರಾಮದ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಗೆ ನೂತನ ಕಟ್ಟಡ ಮಂಜೂರಾಗಿದ್ದು ನಿರ್ಮಾಣ ಕಾಮಗಾರಿಗೆ ಶೀಘ್ರದಲ್ಲಿಯೇ ಚಾಲನೆ ನೀಡಲಾಗುವುದು ಎಂದು ಭರವಸೆ ನೀಡಿದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201
and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248